# ಕರ್ನಾಟಕ ವಿಧಾನ ಪರಿಷತ್ತು

1. ಚುಕ್ಕೆ ರಹಿತ ಪ್ರಶ್ನೆ ಸಂಖ್ಯೆ : 1025 (1174)
2. ಸದಸ್ಯರ ಹೆಸರು : ಶ್ರೀ ಮಧು ಜಿ. ಮಾದೇಗೌಡ (ಪದವೀಧರರ ಕ್ಷೇತ್ರ)
3. ಉತ್ತರಿಸುವ ದಿನಾಂಕ : 21.08.2025
4. ಉತ್ತರಿಸುವ ಸಚಿವರು : ಮುಖ್ಯಮಂತ್ರಿ

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಸರ್ಕಾರದ ಆದೇಶ/ನಿಯಮಗಳ ಪ್ರಕಾರ, ಪ್ರತಿಯೊಂದು ಇಲಾಖೆಯ ವೃಂದ ಮತ್ತು ನೇಮಕಾತಿ (C&R) ನಿಯಮಗಳನ್ನು ಎಷ್ಟು ವರ್ಷಗಳಿಗೊಮ್ಮೆಪರಿಷ್ಕರಿಸಿ ಜಾರಿಗೆ ತರಬೇಕಾಗಿದೆ; | ಸರ್ಕಾರದ ಎಲ್ಲಾ ಇಲಾಖೆಗಳು ವೃಂದ ಮತ್ತು ನೇಮಕಾತಿ ನಿಯಮಗಳನ್ನು ಕನಿಷ್ಠ ಮೂರು ವರ್ಷಗಳಿಗೊಮ್ಮೆ ಪುನರಾವಲೋಕಿಸುವಂತೆ ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 97 ಸೇನಿಡಿ 2004,ದಿನಾಂ08.10.2004 ರಲ್ಲಿ ಸೂಚನೆಗಳನ್ನು ನೀಡಲಾಗಿದೆ. |
| ಆ) | ಬಹುತೇಕ ಇಲಾಖೆಗಳ ವೃಂದ ಮತ್ತು ನೇಮಕಾತಿ (C&R) ನಿಯಮಗಳು ಪರಿಷ್ಕರಣೆಯಾಗಿ 15, 20, 25 ವರ್ಷಗಳೇ ಕಳೆದಿದ್ದರೂ ಕಾಲಕಾಲಕ್ಕೆ ವೃಂದ ಮತ್ತು ನೇಮಕಾತಿ (C&R) ನಿಯಮಗಳಲ್ಲಿ ಸಮಗ್ರ ಪರಿಷ್ಕರಣೆ ಆಗದಿರುವುದು ಸರ್ಕಾರದ ಗಮನಕ್ಕೆ ಬಂದಿದಿಯೇ: | ರಾಜ್ಯ ಸರ್ಕಾರದ ಎಲ್ಲಾ ಇಲಾಖೆ/ಅಧೀನ ಇಲಾಖೆಗಳಲ್ಲಿ ಚಾಲ್ತಿಯಲ್ಲಿರುವ ವೃಂದ ಮತ್ತು ನೇಮಕಾತಿ ನಿಯಮಗಳ ರಚನೆ /ಪರಿಷ್ಕರಣೆಗೆ ಸಂಬಂಧಿಸಿದಂತೆ, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಯಿಂದ ಕಾಲಕಾಲಕ್ಕೆ ಸರ್ಕಾರದ ಆದೇಶ/ಸುತ್ತೋಲೆಗಳ ಮೂಲಕ ಮಾರ್ಗಸೂಚಿಗಳನ್ನು ನೀಡಲಾಗಿದೆ. |
| ಇ) | ಇದ್ದಲ್ಲಿ, ವಿವಿಧ ಇಲಾಖೆಗಳಲ್ಲಿನ ವೃಂದ ಮತ್ತು ನೇಮಕಾತಿ (C&R) ನಿಯಮಗಳನ್ನು ಪರಿಷ್ಕರಿಸುವಂತೆ ಸೂಚಿಸಿ ಸರ್ಕಾರ ಯಾವ ರೀತಿಯ ನಿರ್ದೇಶನಗಳನ್ನು ನೀಡಲಿದೆ ಹಾಗೂ ಕಾಲಮಿತಿಯನ್ನು ನಿರ್ದಿಷ್ಟಪಡಿಸಲಿದೆ; ಈ ನಿಟ್ಟಿನಲ್ಲಿ ಕೈಗೊಂಡಿರುವ ಕ್ರಮಗಳೇನು: (ಸಂಪೂರ್ಣ ವಿವರ ನೀಡುವುದು) | ಕೆಲವು ಸರ್ಕಾರದ ಇಲಾಖೆಗಳಲ್ಲಿ ಬಹಳ ವರ್ಷಗಳಿಂದ ವೃಂದ ಮತ್ತು ನೇಮಕಾತಿ ನಿಯಮಗಪರಿಷ್ಕರಣೆಯಾಗದಿರುವಹಿನ್ನೆಲೆಯಲ್ಲಿ ಎಲ್ಲಾ ಇಲಾಖೆಗಳ ವೃಂದ ಮತ್ತು ನೇಮಕಾತಿ ನಿಯಮಗಳ ಸಮಗ್ರ ಪರಿಷ್ಕರಣೆಗೆ ಸಂಬಂಧಿಸಿದಂತೆ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಹಂತದಲ್ಲಿ ಪರಿಶೀಲನೆ ಸಭೆಯನ್ನು ಕೈಗೊಳ್ಳಲಾಗಿದೆ.<br><br>ಸಚಿವಾಲಯದ ಆಡಳಿತ ಇಲಾಖೆಗಳಡಿ ಬರುವ ಕ್ಷೇತ್ರ ಇಲಾಖೆಗಳ ವೃಂದ ಮತ್ತು ನೇಮಕಾತಿ ನಿಯಮಗಳನ್ನು ಸಮಗ್ರವಾಗಿ ಪರಿಷ್ಕರಣೆ ಮಾಡುವ ಕುರಿತು ಕಾರ್ಯಾಗಾರವನ್ನು ದಿನಾಂಕ:06.08.2025 ರಂದು ಏರ್ಪಡಿಸಿವೃಂದ |

| | | |
|---|---|---|
| ಈ) | 5 ವರ್ಷ ಮೇಲ್ಪಟ್ಟಿದ್ದರೂ ವೃಂದ ಮತ್ತು ನೇಮಕಾತಿ (C&R) ನಿಯಮಗಳನ್ನು ಪರಿಷ್ಕರಣೆ ಮಾಡದಿರುವ ಇಲಾಖೆಗಳು ಯಾವುವು: ಪರಿಷ್ಕರಣೆ ಮಾಡದಿರುವುದಕ್ಕೆ ಕಾರಣಗಳೇನು? | 5 ವರ್ಷ ಮೇಲ್ಪಟ್ಟ ವೃಂದ ಮತ್ತು ನೇಮಕಾತಿ (C&R) ನಿಯಮಗಳನ್ನು ಹೊಂದಿರುವ ಇಲಾಖೆಗಳ ವಿವರವನ್ನು ಅನುಬಂಧದಲ್ಲಿ ಲಗತ್ತಿಸಿದೆ.<br>ಸರ್ಕಾರದ ವಿವಿಧ ಇಲಾಖೆಗಳು ವೃಂದ ಮತ್ತು ನೇಮಕಾತಿ (C&R) ನಿಯಮಗಳ ಪರಿಷ್ಕರಣೆ ಪ್ರಸ್ತಾವನೆಗೆ ನಿಯಮಾನುಸಾರ ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ, ಸಂಸದೀಯ ವ್ಯವಹಾರಗಳು ಮತ್ತು ಶಾಸನಾ ರಚನೆ ಇಲಾಖೆ ಮತ್ತು ಆರ್ಥಿಕ ಇಲಾಖೆಗಳೊಂದಿಗೆ ಸಮಾಲೋಚನೆ ಮಾಡಲು ಕ್ರಮವಹಿಸಿದ್ದು, ಪರಿಷ್ಕರಣೆ ಕಾರ್ಯ ಪ್ರಗತಿಯಲ್ಲಿರುತ್ತದೆ. |

ಸಂಖ್ಯೆ: ಸಿಆಸುಇ 183 ಸೇನಿಡಿ 2025

(ಸಿದ್ದರಾಮಯ್ಯ)
ಮುಖ್ಯಮಂತ್ರಿ

ವಿಧಾನ ಪರಿಷತ್ತಿನ ಮಾನ್ಯ ಸದಸ್ಯರಾದ ಶ್ರೀ ಮಧು ಜಿ. ಮಾದೇಗೌಡ (ಪದವೀಧರರ ಕ್ಷೇತ್ರ) ಇವರ ಚುಕ್ಕೆ ರಹಿತ ಪ್ರಶ್ನೆ ಸಂಖ್ಯೆ: 1025 (1174)ಕ್ಕೆ ಅನುಬಂಧ

| ಕ್ರಮ ಸಂಖ್ಯೆ | ಇಲಾಖೆಯ ಹೆಸರು |
|---|---|
| 1 | ಕನ್ನಡ ಮತ್ತು ಸಂಸ್ಕೃತಿ , ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ |
| 2 | ಆರ್ಥಿಕ ಇಲಾಖೆ |
| 3 | ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ |
| 4 | ಕಾರ್ಮಿಕ ಇಲಾಖೆ |
| 5 | ಜಲಸಂಪನ್ಮೂಲ ಇಲಾಖೆ |
| 6 | ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ |
| 7 | ವಾಣಿಜ್ಯ ಮತ್ತು ಕೈಗಾರಿಕಾ ಇಲಾಖೆ |
| 8 | ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಇಲಾಖೆ |
| 9 | ಒಳಾಡಳಿತ ಇಲಾಖೆ |
| 10 | ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆ |
| 11 | ಕಂದಾಯ ಇಲಾಖೆ |
| 12 | ನಗರಾಭಿವೃದ್ಧಿ ಇಲಾಖೆ |
| 13 | ಲೋಕೋಪಯೋಗಿ ಇಲಾಖೆ |
| 14 | ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ |
| 15 | ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆ |
| 16 | ಕಾನೂನು ಇಲಾಖೆ |
| 17 | ಇಂಧನ ಇಲಾಖೆ |
| 18 | ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ವಿಕಲಚೇತನರ ಹಾಗೂ ಹಿರಿಯ ನಾಗರೀಕರ ಸಬಲೀಕರಣ ಇಲಾಖೆ |
| 19 | ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ |
| 20 | ಪರಿಶಿಷ್ಟ ಪಂಗಡಗಳ ಕಲ್ಯಾಣ ಇಲಾಖೆ |
| 21 | ರೇಷ್ಮೆ ಇಲಾಖೆ |
| 22 | ಪಶುಸಂಗೋಪನೆ ಮತ್ತು ಮೀನುಗಾರಿಕೆ ಇಲಾಖೆ |
| 23 | ಪ್ರವಾಸೋದ್ಯಮ ಇಲಾಖೆ |
| 24 | ಸಹಕಾರ ಇಲಾಖೆ |
| 25 | ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ |
| 26 | ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆ |
| 27 | ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ |
| 28 | ಅರಣ್ಯ ಪರಿಸರ ಮತ್ತು ಜೀವಿಶಾಸ್ತ್ರ ಇಲಾಖೆ |
| 29 | ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ |
| 30 | ವೈದ್ಯಕೀಯ ಶಿಕ್ಷಣ ಇಲಾಖೆ |
| 31 | ವಿದ್ಯುನ್ಮಾನ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆ. |
| 32 | ಶಿಕ್ಷಣ ಇಲಾಖೆ (ಉನ್ನತ) |
| 33 | ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ (ಇ-ಆಡಳಿತ) |